ಅ.ದಾ.ನಂ.18/2013
ಡಿ.ಡಬ್ಲೂ:2

**<u>ಸಾಕ್ಷಿಯನ್ನು ಇಂದು ದಿನಾಂಕಃ 17.04.2026 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು.</u>**

**<u>ಪಾಟೀ ಸವಾಲುಃ ಶ್ರೀ. ವಾಯ್.ಎನ್.ಎಲ್., ವಕೀಲರಿಂದ ವಾದಿ ಪರವಾಗಿ</u>**

1. ನನ್ನ ಮುಖ್ಯವಿಚಾರಣೆ ಪ್ರಮಾಣ ಪತ್ರವನ್ನು ತಯಾರಿಸಲು ನಾನೇ ನಮ್ಮ ವಕೀಲರಿಗೆ ಮಾಹಿತಿ ಕೊಟ್ಟಿರುತ್ತೇನೆ. ಈ ದಾವೆಯನ್ನು ಶಿವಪ್ಪ ಎಂಬುವವರು ಸಲ್ಲಿಸಿರುತ್ತಾರೆ. 1ನೇ ಪ್ರತಿವಾದಿಯು ನನಗೆ ದಾವಾ ಆಸ್ತಿಯನ್ನು ಮಾರಾಟ ಮಾಡಿರುತ್ತಾರೆ. 1ನೇ ಪ್ರತಿವಾದಿಯು ನನಗೆ ದಾವಾ ಆಸ್ತಿಯನ್ನು ಮಾರಾಟ ಮಾಡಿ 16 ವರ್ಷಗಳಾಗಿರುತ್ತದೆ. 1ನೇ ಪ್ರತಿವಾದಿಯು ನನಗೆ ದಾವಾ ಆಸ್ತಿಯನ್ನು ಯಾವ ದಿನಾಂಕ, ತಿಂಗಳು ಮತ್ತು ಯಾವ ವರ್ಷದಲ್ಲಿ ಮಾರಾಟ ಮಾಡಿರುತ್ತಾರೆ ಎಂಬುದರ ಬಗ್ಗೆ ನನಗೆ ನಿರ್ಧಿಷ್ಟವಾಗಿ ಗೊತ್ತಿಲ್ಲ.

2. ನಾನು 1ನೇ ಪ್ರತಿವಾದಿಯು ವಾರಸಾ ಮಾಡಿಕೊಂಡಿರುವ ದಾಖಲಾತಿಗಳನ್ನು ನೋಡಿ ದಾವಾ ಆಸ್ತಿಯನ್ನು ಖರೀದಿಸಿರುತ್ತಾರೆ. ನಾನು ಈ ಕುರಿತು ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ. ನಾನು ದಾವಾ ಆಸ್ತಿಯನ್ನು ಖರೀದಿಸುವಾಗ ನಾನು, ರಾಮಣ್ಣ ಬಾಟಿ, ಮಟ್ಟಿಹಾಳ ಗೌಡರು ಮತ್ತು 1ನೇ ಪ್ರತಿವಾದಿ ಇದ್ದೇವು. ನಾವು ಖರೀದಿ ವ್ಯವಹಾರವನ್ನು ಬಸವನ ಬಾಗೇವಾಡಿಯಲ್ಲಿ ಮಾಡಿರುತ್ತೇವೆ. ನಾವು ಖರೀದಿ ವ್ಯವಹಾರವನ್ನು ಬಸವನ ಬಾಗೇವಾಡಿಯಲ್ಲಿ ಮಾಡಿರುವುದಿಲ್ಲ ಬದಲಾಗಿ ಕೋಲಾರದಲ್ಲಿ ಮಾಡಿರುತ್ತೇವೆ ಎಂದರೆ ಸಾಕ್ಷಿಯು ಬ.ಬಾಗೇವಾಡಿಯಲ್ಲಿ ನಾವು ಖರೀದಿ ವ್ಯವಹಾರ ಮಾಡಿರುತ್ತೇವೆ ಎಂದು ಹೇಳುತ್ತಾರೆ.

3. ನಾನು ಖರೀದಿಸಿರುವ ಆಸ್ತಿ ನಂಬರ ನನಗೆ ಗೊತ್ತಿರುವುದಿಲ್ಲ. ನಾನು ಆಸ್ತಿ ನಂ.3203 ರ ಆಸ್ತಿಯನ್ನು ಖರೀದಿಸಿರುತ್ತೇನೆ ಎಂದರೆ ಸಾಕ್ಷಿಯು ನನಗೆ ನಂಬರ ಗೊತ್ತಿರುವುದಿಲ್ಲ ಎಂದು ಹೇಳುತ್ತಾರೆ. ಸಾಕ್ಷಿಯು ಮುಂದುವರೆದು ನಾನು 1 ನೇ ಪ್ರತಿವಾದಿಯ ಆಸ್ತಿಯನ್ನು ಖರೀದಿಸಿರುತ್ತೇನೆ. ದಾವಾ ಆಸ್ತಿಯಲ್ಲಿ ನಾನು ಸ್ವಾಧೀನಾನುಭವದಲ್ಲಿ ಇರುತ್ತೇನೆ. ದಾವಾ ಆಸ್ತಿಯಲ್ಲಿ ವಾದಿ ಸ್ವಾಧೀನಾನುಭವದಲ್ಲಿ ಇದ್ದರೂ ಕೂಡಾ ನಾನು ಸ್ವಾಧೀನುಭವದಲ್ಲಿ ಇರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

4. ದಾವಾ ಆಸ್ತಿಯ ಚಕಬಂದಿಯನ್ನು ನನಗೆ ಹೇಳಲು ಬರುವುದಿಲ್ಲ. ದಾವಾ ಆಸ್ತಿಯು ಒಟ್ಟು ಕುಟುಂಬದ ಆಸ್ತಿ ಆಗಿತ್ತು ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮೂಲ ನಂಬರ ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗೆ ಸಮಾವಕಾಶ ಕೋರಿದ್ದರಿಂದ ಸಮಾವಕಾಶ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

1 ನೇ **ಹೆಚ್ಚುವರಿ ಸಿವಿಲ್**
**ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,**
**ಬಸವನ ಬಾಗೇವಾಡಿ.**